ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತಿನ ಸಭಾಪತಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 25/3/21

**ಕೊರತೆ** ಗೋಹತ್ಯೆ ನಿಷೇಧ ಬಳಿಕ ಸಿಬ್ಬಂದಿ ಕೊರತೆ ಕಾಣ್ತಿದೆ

# ಪಶುಸಂಗೋಪನಾ ಇಲಾಖೆ ಖಾಲಿ ಹುದ್ದೆ ಭರ್ತಿ ಮಾಡಿ: ಹೊರಟ್ಟಿ ಪತ್ರ

**ಬೆಂಗಳೂರು:** ರಾಜ್ಯದ ಪಶುಸಂಗೋಪನೆ ಇಲಾಖೆಯಲ್ಲಿ ಎಂಟು ಸಾವಿರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಬೇಕು ಹಾಗೂ ಅನ್ಯ ಇಲಾಖೆಗಳಿಗೆ ನಿಯೋಜನೆಗೊಂಡಿರುವ 1200 ಸಿಬ್ಬಂದಿಯನ್ನು ಮಾತೃ ಇಲಾಖೆಗೆ ವರ್ಗಾಯಿಸಬೇಕು ಎಂದು ಒತ್ತಾಯಿಸಿ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಸರ್ಕಾರಕ್ಕೆ ಪತ್ರ ಬರೆದಿದ್ದಾರೆ.



**ಸಚಿವ ಪ್ರಭು ಚವ್ಹಾಣ್‌ಗೆ ಸಭಾಪತಿ ಹೊರಟ್ಟಿ ಪತ್ರ**

ಗೋ ಹತ್ಯೆ ನಿಷೇಧ ಕಾಯ್ದೆಯನ್ನು ಜಾರಿಗೆ ತಂದಿರುವುದು ಶ್ಲಾಘನೀಯ. ಆದರೆ, ಈ ಪ್ರಕ್ರಿಯೆಯಿಂದ ಪಶು ಸಂಗೋಪನಾ ಇಲಾಖೆಯ ಅಭಿವೃದ್ಧಿ ಮೇಲೆ ಪರಿಣಾಮ ಬೀರುವುದಲ್ಲದೆ, ಸಿಬ್ಬಂದಿ ಕೊರತೆಯೂ ಎದ್ದು ಕಾಣುವಂತಿದೆ ಎಂಧು ಅವರು ಪಶುಸಂಗೋಪನಾ ಸಚಿವ ಪ್ರಭು ಚವ್ಹಾಣ್ ಅವರಿಗೆ ಬರೆದಿರುವ ಪತ್ರದಲ್ಲಿ ಕಳವಳ ವ್ಯಕ್ತಪಡಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವುದು ಹಾಗೂ ಪಶು ಇಲಾಖೆಯಲ್ಲಿ ನೇಮಕಗೊಂಡು ಬೇರೆ ಇಲಾಖೆಗೆ ನಿಯೋಜನೆಗೊಂಡ ಸಿಬ್ಬಂದಿ ಸೇವೆಯನ್ನು ಮಾತೃ ಇಲಾಖೆಗೆ ಹಿಂಪಡೆಯುವುದು ಅವಶ್ಯಕವಾಗಿದೆ. ಈ ಬಗ್ಗೆ ತುರ್ತು ಕ್ರಮ ಕೈಗೊಂಡು, ಕೃಷಿ ಪ್ರಧಾನವಾದ ನಮ್ಮ ರಾಜ್ಯದಲ್ಲಿ ಎಲ್ಲ ರಾಜ್ಯಗಳ ಯೋಗಕ್ಷೇಮಕ್ಕೆ ರೈತಾಪಿ ವರ್ಗದವರಿಗೆ ಅನುಕೂಲ ಕಲ್ಪಿಸಿಕೊಡಬೇಕು. ಕೃಷಿ ಪ್ರಧಾನವಾದ ನಮ್ಮ ರಾಜ್ಯದಲ್ಲಿ ರಾಸುಗಳ ಅಭಿವೃದ್ಧಿ, ಕಾಳಜಿ ಹಾಗೂ ಆರೈಕೆ ನಮ್ಮೆಲ್ಲರ ಹೊಣೆಯೇ ಸರಿ. ಪ್ರಸ್ತುತ ಪಶು ಸಂಗೋಪನೆ ಇಲಾಖೆಯಲ್ಲಿ ಸುಮಾರು 8000 ಹುದ್ದೆಗಳು ಖಾಲಿ ಇರುವುದಲ್ಲದೆ, ಪಶು ಸಂಗೋಪನಾ ಇಲಾಖೆಯಲ್ಲಿ ನೇಮಕಗೊಂಡ ಸುಮಾರು 1200 ಸಿಬ್ಬಂದಿ ವರ್ಗದವರು ಬೇರೆ ಬೇರೆ ಇಲಾಖೆಗಳಲ್ಲಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದು ತಿಳಿದು ಬಂದಿದೆ ಎಂದಿದ್ದಾರೆ.